# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ -145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಯವರ ಅಪ್ಪಣೆ ಮೇರೆಗೆ ದಿನಾಂಕ:07/05/2022ರ ಶನಿವಾರದಂದು ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟಿ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಕೆಲಸ ಪರಿವೀಕ್ಷಕರು ವಾರ್ಡ್–145.
3. ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್–145.
4. ಕಿರಿಯ ಇಂಜಿನಿಯರ್ (ವಿದ್ಯುತ್ ವಿಭಾಗ ಬಿಬಿಎಂಪಿ).
5. ತೋಟಗಾರಿಕೆ ಇಲಾಖೆ, ಮೇಸ್ತ್ರಿ ವಾರ್ಡ್ 145.
6. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ವಾರ್ಡ್ 145.
7. ಸಹಾಯಕ ಇಂಜಿನಿಯರ್ (BWSSB).
8. ಸಹಾಯಕ ಇಂಜಿನಿಯರ್ (ಬೆಸ್ಕಾಂ)
9. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.
10. ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ, ಬಿಬಿಎಂಪಿ ಕೇಂದ್ರ ಕಛೇರಿ.
11. ಸ.ಕಾ.ನಿ. ಅಭಿಯಂತರರು, ಯೋಜನೆ–ಕೇಂದ್ರ, ಬಿಬಿಎಂಪಿ ಕೇಂದ್ರ ಕಛೇರಿ

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
2. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಸಂಚಾರ ವಾರ್ಡ್ 145.
3. ಅರಣ್ಯ ಇಲಾಖೆಯ ಅಧಿಕಾರಿಗಳು.

*********

1. ವಾರ್ಡ್ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ 4ನೇ ಮುಖ್ಯರಸ್ತೆಯಲ್ಲಿ ಹಾಗೂ ಹೆಚ್. ಸಿದ್ದಯ್ಯ ರಸ್ತೆಯಲ್ಲಿ ಚರಂಡಿಗಳಲ್ಲಿ ಮಳೆ ನೀರು ಸರಾಗವಾಗಿ ಹರಿಯಲು ಅವಕಾಶವಿಲ್ಲದೇ ಸ್ಥಳೀಯರಿಗೆ ತೊಂದರೆಯಾಗುತ್ತಿರುತ್ತದೆ ಎಂದು ದೂರಿದರು. ಸಂಬಂಧಿಸಿದಂತೆ ಸ.ಕಾ.ನಿ. ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ಹಾಗೂ ಯೋಜನೆ–ಕೇಂದ್ರ ರವರುಗಳ ಮಾತನಾಡಿ ಸ್ಥಳೀಯರೊಂದಿಗೆ ಪರಿವೀಕ್ಷಣೆ ಮಾಡಿ ಕ್ರಮ ಕೈಗೊಳ್ಳುವುದಾಗಿ ತಿಳಿಸಿದರು

2. ವಾರ್ಡ್ ವ್ಯಾಪ್ತಿಯ ಹೊಸೂರು ಮುಖ್ಯ ರಸ್ತೆಯಲ್ಲಿ ಪದೇ ಪದೇ ಕ್ರೇನ್ ಪಾರ್ಕಿಂಗ್ ಮಾಡುತ್ತಿರುವುದರಿಂದ ರಸ್ತೆಯಲ್ಲಿ ಸಂಚರಿಸುವ ವಾಹನ ಹಾಗೂ ಪಾದಚಾರಿಗಳಿಗೆ ತೀವ್ರ ತರಹದ ತೊಂದರೆಯಾಗಿರುತ್ತದೆ, ಅಭಯ ಆಶ್ರಮದ ಮುಂಭಾಗದ ರಸ್ತೆಯಲ್ಲಿ ಪಾರ್ಕಿಂಗ್ ಮಾಡುತ್ತಿರುವುದರಿಂದ ತೊಂದರೆಯಾಗುತ್ತಿದೆ ಎಂದು ಸಭೆಯಲ್ಲಿ ಸಾರ್ವಜನಿಕರು ದೂರಿದರು. ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ಸಂಚಾರಿ ಪೊಲೀಸ್ ವಿಭಾಗ ರವರನ್ನು ಕೋರುವುದಾಗಿ ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

3. ವಾರ್ಡ್ ವ್ಯಾಪ್ತಿಯ ರಾಣಿಪಾರ್ಕ್ ಮುಂಭಾಗದ ರಸ್ತೆಯಲ್ಲಿ ಯುಟಿಲಿಟಿ ಡಕ್ಟ್ ಪೈಪ್‌ಗಳನ್ನು ಹಾಕಿದ್ದು, ಸಾರ್ವಜನಿಕರು ಪಾರ್ಕ್ ಒಳಗೆ ಹೋಗಿ ಬರಲು ತೊಂದರೆಯಾಗುತ್ತಿರುತ್ತದೆ ಹಾಗೂ ಹೆಚ್. ಸಿದ್ದಯ್ಯ ರಸ್ತೆಯಲ್ಲಿ ಸಂಚರಿಸುವ ವಾಹನಗಳು ಹಾಗೂ ಸಾರ್ವಜನಿಕರಿಗೂ ತೊಂದರೆಯಾಗಿರುತ್ತದೆ ಎಂದು ತಿಳಿಸಿದರು. ಸಂಬಂಧಿಸಿದಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ–ಕೇಂದ್ರ ರವರು ಮಾತನಾಡಿ ತೆರವುಗೊಳಿಸುವುದಾಗಿ ತಿಳಿಸಿದರು

4. ವಾರ್ಡಿನ ಬೃಂದಾವನ ಸ್ಲಂನಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಮುಖ್ಯ ನೀರು ಸರಬರಾಜು ಕೊಳವೆಯನ್ನು ಅಳವಡಿಸಿದ್ದು, ಅದರಿಂದ ಪ್ರತಿ ಮನೆಗಳಿಗೆ ಸರಿಯಾಗಿ ಸಂಪರ್ಕವನ್ನು ಕಲ್ಪಿಸದೇ ಇರುವುದರಿಂದ ನೀರು ಸರಿಯಾಗಿ ಸರಬರಾಜು ಆಗುತ್ತಿಲ್ಲವೆಂದು ದೂರಿದರು. ಸಂಬಂಧಿಸಿದಂತೆ ಸಹಾಯಕ ಅಭಿಯಂತರರು, BWSSB ರವರು ಸ್ಥಳ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

5. ವಾರ್ಡಿನ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ ರೆಡ್ ಫೀಲ್ಡ್‌ನಲ್ಲಿ ಕಾಮಗಾರಿಯು ಸರಿಯಾಗಿ ನಡೆಯುತ್ತಿಲ್ಲವೆಂದು ಸಭೆಯಲ್ಲಿ ದೂರಿದರು. ಸದರಿ ವಿಷಯದ ಬಗ್ಗೆ ಯೋಜನೆ–ದಕ್ಷಿಣ ವಿಭಾಗ ಇಂಜಿನಿಯರ್ ರವರು ಮಾತನಾಡಿ ರೆಡ್ ಫೀಲ್ಡ್ ಕಾಮಗಾರಿಗೆ ಸಂಬಂಧಿಸಿದಂತೆ ಸ್ಥಳೀಯರ ಜೊತೆಯಲ್ಲಿ ಒಂದು ಸಭೆಯನ್ನು ನಡೆಸಲಾಗುವುದೆಂದು ಸಭೆಗೆ ತಿಳಿಸಿದರು.

6. ವಿಲ್ಸನ್‌ಗಾರ್ಡನ್ 9ನೇ ಅಡ್ಡರಸ್ತೆಯಲ್ಲಿ BWSSB ವಾಲ್ ಹಾಳಾಗಿದ್ದು, ಎಲ್ಲಾ ಮನೆಗಳಿಗೆ ಸರಿಯಾಗಿ ನೀರು ಸರಬರಾಜು ಆಗುತ್ತಿಲ್ಲವೆಂದು ಸಭೆಯಲ್ಲಿ ದೂರಿದರು. ಸಹಾಯಕ ಅಭಿಯಂತರರು, BWSSB ರವರು ಸ್ಥಳ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

2. ವಾರ್ಡ್ ವ್ಯಾಪ್ತಿಯ ಹೊಸೂರು ಮುಖ್ಯ ರಸ್ತೆಯಲ್ಲಿ ಪದೇ ಪದೇ ಕ್ರೇನ್ ಪಾರ್ಕಿಂಗ್ ಮಾಡುತ್ತಿರುವುದರಿಂದ ರಸ್ತೆಯಲ್ಲಿ ಸಂಚರಿಸುವ ವಾಹನ ಹಾಗೂ ಪಾದಚಾರಿಗಳಿಗೆ ತೀವ್ರ ತರಹದ ತೊಂದರೆಯಾಗಿರುತ್ತದೆ, ಅಭಯ ಆಶ್ರಮದ ಮುಂಭಾಗದ ರಸ್ತೆಯಲ್ಲಿ ಪಾರ್ಕಿಂಗ್ ಮಾಡುತ್ತಿರುವುದರಿಂದ ತೊಂದರೆಯಾಗುತ್ತಿದೆ ಎಂದು ಸಭೆಯಲ್ಲಿ ಸಾರ್ವಜನಿಕರು ದೂರಿದರು. ಸದರಿ ವಿಷಯದ ಬಗ್ಗೆ ಕ್ರಮ ಕೈಗೊಳ್ಳಲು ಸಂಚಾರಿ ಪೊಲೀಸ್ ವಿಭಾಗ ರವರನ್ನು ಕೋರುವುದಾಗಿ ಅಧ್ಯಕ್ಷರು ಸಭೆಯಲ್ಲಿ ತಿಳಿಸಿದರು.

3. ವಾರ್ಡ್ ವ್ಯಾಪ್ತಿಯ ರಾಣಿಪಾರ್ಕ್ ಮುಂಭಾಗದ ರಸ್ತೆಯಲ್ಲಿ ಯುಟಿಲಿಟಿ ಡಕ್ಟ್ ಪೈಪ್‌ಗಳನ್ನು ಹಾಕಿದ್ದು, ಸಾರ್ವಜನಿಕರು ಪಾರ್ಕ್ ಒಳಗೆ ಹೋಗಿ ಬರಲು ತೊಂದರೆಯಾಗುತ್ತಿರುತ್ತದೆ ಹಾಗೂ ಹೆಚ್. ಸಿದ್ದಯ್ಯ ರಸ್ತೆಯಲ್ಲಿ ಸಂಚರಿಸುವ ವಾಹನಗಳು ಹಾಗೂ ಸಾರ್ವಜನಿಕರಿಗೂ ತೊಂದರೆಯಾಗಿರುತ್ತದೆ ಎಂದು ತಿಳಿಸಿದರು. ಸಂಬಂಧಿಸಿದಂತೆ ಸಹಾಯಕ ಕಾರ್ಯಪಾಲಕ ಅಭಿಯಂತರರು, ಯೋಜನೆ–ಕೇಂದ್ರ ರವರು ಮಾತನಾಡಿ ತೆರವುಗೊಳಿಸುವುದಾಗಿ ತಿಳಿಸಿದರು

4. ವಾರ್ಡಿನ ಬೃಂದಾವನ ಸ್ಲಂನಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವತಿಯಿಂದ ಮುಖ್ಯ ನೀರು ಸರಬರಾಜು ಕೊಳವೆಯನ್ನು ಅಳವಡಿಸಿದ್ದು, ಅದರಿಂದ ಪ್ರತಿ ಮನೆಗಳಿಗೆ ಸರಿಯಾಗಿ ಸಂಪರ್ಕವನ್ನು ಕಲ್ಪಿಸದೇ ಇರುವುದರಿಂದ ನೀರು ಸರಿಯಾಗಿ ಸರಬರಾಜು ಆಗುತ್ತಿಲ್ಲವೆಂದು ದೂರಿದರು. ಸಂಬಂಧಿಸಿದಂತೆ ಸಹಾಯಕ ಅಭಿಯಂತರರು, BWSSB ರವರು ಸ್ಥಳ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.

5. ವಾರ್ಡಿನ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ ರೆಡ್ ಫೀಲ್ಡ್‌ನಲ್ಲಿ ಕಾಮಗಾರಿಯು ಸರಿಯಾಗಿ ನಡೆಯುತ್ತಿಲ್ಲವೆಂದು ಸಭೆಯಲ್ಲಿ ದೂರಿದರು. ಸದರಿ ವಿಷಯದ ಬಗ್ಗೆ ಯೋಜನೆ–ದಕ್ಷಿಣ ವಿಭಾಗ ಇಂಜಿನಿಯರ್ ರವರು ಮಾತನಾಡಿ ರೆಡ್ ಫೀಲ್ಡ್ ಕಾಮಗಾರಿಗೆ ಸಂಬಂಧಿಸಿದಂತೆ ಸ್ಥಳೀಯರ ಜೊತೆಯಲ್ಲಿ ಒಂದು ಸಭೆಯನ್ನು ನಡೆಸಲಾಗುವುದೆಂದು ಸಭೆಗೆ ತಿಳಿಸಿದರು.

6. ವಿಲ್ಸನ್‌ಗಾರ್ಡನ್ 9ನೇ ಅಡ್ಡರಸ್ತೆಯಲ್ಲಿ BWSSB ವಾಲ್ ಹಾಳಾಗಿದ್ದು, ಎಲ್ಲಾ ಮನೆಗಳಿಗೆ ಸರಿಯಾಗಿ ನೀರು ಸರಬರಾಜು ಆಗುತ್ತಿಲ್ಲವೆಂದು ಸಭೆಯಲ್ಲಿ ದೂರಿದರು. ಸಹಾಯಕ ಅಭಿಯಂತರರು, BWSSB ರವರು ಸ್ಥಳ ಪರಿಶೀಲನೆ ಮಾಡಿ ಕ್ರಮ ಕೈಗೊಳ್ಳುವುದಾಗಿ ಸಭೆಗೆ ತಿಳಿಸಿದರು.